Akashvani : Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

18.07.2025 18.40 hrs

<><*<><>*><>

## ಮುಖ್ಯಾಂಶಗಳು

- ಗ್ರೀನ್ ಹೈಡ್ರೋಜನ್ ; ಉತ್ಪಾದನಾ ವೆಚ್ಚ ಕಡಿತಗೊಳಿಸಿ ಸಂಗ್ರಹಣಾ ಸಮಸ್ಯೆ ಪರಿಹರಿಸಿ ವಾಣಿಜ್ಯ ಬಳಕೆಗೆ ಸರ್ಕಾರದ ಪ್ರಯತ್ನ -ಪ್ರಹ್ಲಾದ್ ಜೋಶಿ
- ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ಎಲೆಕ್ಟ್ರಿಕ್ ಬಸ್ - ಸಚಿವ ರಾಮಲಿಂಗಾರೆಡ್ಡಿ ಭರವಸೆ
- ಈಜೀಪುರ ಮೇಲ್ಸೇತುವೆ ಕಾಮಗಾರಿ ೨೦೨೬ ರೊಳಗೆ ಪೂರ್ಣಗೊಳಿಸಲು ಬಿಬಿಎಂಪಿ ಮುಖ್ಯ ಆಯುಕ್ತರ ಸೂಚನೆ
- ಬೆಳಗಾವಿಯ ನವಿಲುತೀರ್ಥ ಜಲಾಶಯ ಭರ್ತಿ ; ಇಂದಿನಿಂದ ೬ ಟಿಎಂಸಿ ನೀರು ಮಲಪ್ರಭಾ ಅಚ್ಚುಕಟ್ಟು ಪ್ರದೇಶಕ್ಕೆ ಹರಿಸಲು ಸೂಚನೆ

<><*<><>*><>

ಕೇಂದ್ರ ಸರ್ಕಾರ ಗ್ರೀನ್ ಹೈಡ್ರೋಜನ್ ಉತ್ಪಾದನೆ ಕುರಿತು ಸಂಶೋಧನೆ ಹಾಗೂ ಉತ್ಪಾದನೆಗೆ ಸಂಬಂಧಿಸಿದ ಹಾಗೆ ೨೦ ಸಾವಿರ ಕೋಟಿ ಅನುದಾನ ನೀಡಿದ್ದು, ಹೈಡ್ರೋಜನ್ ಹಾಗೂ ಎಲೆಕ್ಟ್ರೋಲೈಸರ್ ಉತ್ಪಾದನೆಗೆ ಒತ್ತು ನೀಡಲಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಅವರು ಇಂದು ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆಯ ಗ್ರೀನ್ ಹೈಡ್ರೋಜನ್ ಫೆಸಿಲಿಟಿ ಘಟಕಕ್ಕೆ ಭೇಟಿ ನೀಡಿ, ಮಾತನಾಡುತ್ತ ಬಯೋಮಾಸ್ ನಿಂದ ಗ್ರೀನ್ ಹೈಡ್ರೋಜನ್ ಉತ್ಪಾದನಾ ವೆಚ್ಚ ಕಡಿಮೆಗೊಳಿಸಿ, ಸಂಗ್ರಹಣಾ ವ್ಯವಸ್ಥೆಯಲ್ಲಿರುವ ಸಮಸ್ಯೆಗಳನ್ನು ಪರಿಹರಿಸಿದರೆ ಅದನ್ನು ವಾಣಿಜ್ಯ ಬಳಕೆಗೆ ತರಲು ಸರ್ಕಾರ ಪ್ರಯತ್ನಿಸಲಿದೆ ಎಂದು ಹೇಳಿದರು.

ಧ್ವನಿ : ಪ್ರಲ್ಹಾದ್ ಜೋಶಿ (೩೫ ಸೆಕೆಂಡ್ಸ್)

ಈ ಸಂದರ್ಭದಲ್ಲಿ ಅವರು ಮಾತನಾಡಿ, ಸೂರ್ಯನ ಬೆಳಕಿನ ಮೂಲಕ ವಿದ್ಯುತ್ ಉತ್ಪಾದನೆಗೆ ಉಪಯೋಗಿಸುವ ಪಾಲಿಸಿಲಿಕಾನ್ ಅನ್ನು ಇದೀಗ ಆಮದು ಮಾಡಲಾಗುತ್ತಿದ್ದು, ಭಾರತೀಯ ವಿಜ್ಞಾನ ಸಂಸ್ಥೆಯ ವಿಜ್ಞಾನಿಗಳು ಪೆರೆಸ್ಕೈಟ್ ಎನ್ನುವ ತಂತ್ರಜ್ಞಾನವನ್ನು ಸಂಶೋಧಿಸುವಲ್ಲಿ ಲ್ಯಾಬ್ ಮಟ್ಟದಲ್ಲಿ ಯಶಸ್ವಿಯಾಗಿದ್ದಾರೆ. ಯಾವುದೇ ನವೋದ್ಯಮಗಳು ಮುಂದೆ ಬಂದು ಕೈಗಾರಿಕಾ ಮಟ್ಟದಲ್ಲಿ ಪೈಲೆಟ್ ಯೋಜನೆಯಾಗಿ ಇದನ್ನು ಬಳಸಿದರೆ ಮುಂದಿನ ದಿನಗಳಲ್ಲಿ ಇದೊಂದು ದೊಡ್ಡ ಕ್ರಾಂತಿಯಾಗಲಿದೆ ಎಂದು ಅವರು ತಿಳಿಸಿದರು.

<><*<><>*><>

ಸರ್ಕಾರಕ್ಕೆ ಆದಾಯ ತರುವ ಪ್ರಮುಖ ಇಲಾಖೆಗಳಲ್ಲಿ ಸಾರಿಗೆ ಇಲಾಖೆ ಕೂಡ ಒಂದಾಗಿದ್ದು, ಸಾರಿಗೆ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ನೀಗಿಸಲು, ಈಗಾಗಲೇ ನೇಮಕಾತಿ ಪ್ರಕ್ರಿಯೆ ನಡೆದಿದೆ. ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಸಿಬ್ಬಂದಿ ಕೊರತೆ ಕಡಿಮೆಯಾಗಲಿದೆ ಎಂದು ಸಾರಿಗೆ ಮತ್ತು ಮುಜರಾಯಿ ಇಲಾಖೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ವಿಭಾಗೀಯ ಜಂಟಿ ಸಾರಿಗೆ ಆಯುಕ್ತರ ಕಚೇರಿ ಹಾಗೂ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯ ನೂತನ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ಬೈಲಹೊಂಗಲದಲ್ಲಿ ೫ ಕೋಟಿ ವೆಚ್ಚದಲ್ಲಿ ನೂತನವಾಗಿ ನಿರ್ಮಿಸಲಾದ "ಸ್ವಯಂ ಚಾಲಿತ ಚಾಲನಾ ಪಥ" ಉದ್ಘಾಟನೆ ಮಾಡಲಾಗಿದೆ ಎಂದರು. ರಾಜ್ಯದಲ್ಲಿ ಎಲ್ಲ ಜಿಲ್ಲೆಗಳಿಗೆ ಎಲೆಕ್ಟ್ರಿಕ್ ಬಸ್‌ಗಳನ್ನು ಒದಗಿಸಲಾಗುವುದು. ಕರ್ಕಶ ಹಾರ್ನ್, ಹೆಚ್ಚು ಪ್ರಕಾಶದ ಲೈಟ್‌ಗಳು ಇರುವ ವಾಹನಗಳನ್ನು ಗುರುತಿಸಿ ದಂಡಗಳನ್ನು ವಿಧಿಸಬೇಕು. ಸಾರಿಗೆ ಇಲಾಖೆಯ

ಕಚೇರಿಯಲ್ಲಿ ಮಧ್ಯವರ್ತಿಗಳ ಪ್ರವೇಶಕ್ಕೆ ನಿರ್ಬಂಧ ಹೇರಬೇಕು ಎಂದು ಹೇಳಿದರು. ಬೆಳಗಾವಿ ಜಿಲ್ಲೆಗೆ ಒಟ್ಟು ೩೦೦ ಬಸ್‌ಗಳನ್ನು ನೀಡಲಾಗುವುದು. ಅದರಲ್ಲಿ ನಗರ ಸುತ್ತಮುತ್ತ ಸಂಚಾರಕ್ಕೆ ೧೦೦ ಎಲೆಕ್ಟ್ರಿಕ್ ಬಸ್‌ಗಳನ್ನು ಸಹ ಒದಗಿಸಲಾಗುವುದು. ಕೇಂದ್ರ ಹಾಗೂ ರಾಜ್ಯ ಸರ್ಕಾರದ ೫೦:೫೦ ಅನುಪಾತದಲ್ಲಿ ಸ್ಮಾರ್ಟ್‌ಸಿಟಿ ಯೋಜನೆಯಡಿ ಸಿಟಿಬಸ್ ನಿಲ್ದಾಣ ನಿರ್ಮಾಣ ಮಾಡಲಾಗಿದ್ದು, ಶೀಘ್ರದಲ್ಲೇ ಲೋಕಾರ್ಪಣೆ ಗೊಳಿಸಲಾಗುವುದು ಎಂದು ರಾಮಲಿಂಗಾರೆಡ್ಡಿ ತಿಳಿಸಿದರು.

<><*<><>*><>

ಈಜೀಪುರ ಮೇಲ್ಸೇತುವೆ ಕಾಮಗಾರಿಯನ್ನು ಮಾರ್ಚ್ ೨೦೨೬ರ ವೇಳೆಗೆ ಪೂರ್ಣಗೊಳಿಸಲು ಕ್ರಮ ಕೈಗೊಳ್ಳುವಂತೆ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬನ್ನೇರಘಟ್ಟ ರಸ್ತೆ ಸಕಲವಾರ ಗ್ರಾಮದ ಸೆಗ್ಮೆಂಟ್ ಕಾಸ್ಟಿಂಗ್ ಯಾರ್ಡ್ ಗೆ ಇಂದು ಅಧಿಕಾರಿಗಳೊಂದಿಗೆ ಭೇಟಿ ನೀಡಿ, ಮೇಲ್ಸೇತುವೆಗೆ ಕಾಸ್ಟಿಂಗ್ ಮಾಡುವ ಕಾರ್ಯವನ್ನು ಪರಿಶೀಲನೆ ನಡೆಸಿ ಮಾತನಾಡಿದರು ಅವರು, ಈಜೀಪುರ ಮುಖ್ಯ ರಸ್ತೆಯಲ್ಲಿ ೨.೩೮ ಕಿಲೋಮೀಟರ್ ಉದ್ದದ ಮೇಲ್ಸೇತುವೆ ಕಾಮಗಾರಿ ತ್ವರಿತಗತಿಯಲ್ಲಿ ನಡೆಸಲಾಗುತ್ತಿದೆ. ಸೆಗ್ಮೆಂಟ್ ಕಾಸ್ಟಿಂಗ್ ಅಳವಡಿಸುವ ಕಾಮಗಾರಿಗೆ ವೇಗ ನೀಡಿ ಕಾಸ್ಟಿಂಗ್ ಅಳವಡಿಸುವ ಪ್ರಕ್ರಿಯೆಯನ್ನು ವರ್ಷಾಂತ್ಯದೊಳಗಾಗಿ ಪೂರ್ಣಗೊಳಿಸಬೇಕು. ಇನ್ನುಳಿದ ಕಾಮಗಾರಿಯನ್ನು ಮಾರ್ಚ್ ೨೦೨೬ರ ಒಳಗಾಗಿ ಪೂರ್ಣಗೊಳಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಗುತ್ತಿಗೆದಾರರು ಮತ್ತು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

<><*<><>*><>

ಪ್ರಸಕ್ತ ವರ್ಷ ಉತ್ತಮ ಮಳೆಯಾಗಿರುವುದರಿಂದ ಬೆಳಗಾವಿ ಜಿಲ್ಲೆ ನವಿಲುತೀರ್ಥ ಜಲಾಶಯದಲ್ಲಿ ೨೦ ಟಿ.ಎಂ.ಸಿ. ನೀರು ಸಂಗ್ರಹ ಸಾಧ್ಯವಾಗಿದೆ. ಬೆಳಗಾವಿ ಜಿಲ್ಲೆಯ ಕುಡಿಯುವುದಕ್ಕಾಗಿ ೧೪ ಟಿಎಂಸಿ ನೀರು ಕಾಯ್ದುಕೊಂಡು ಉಳಿದ ೬ ಟಿಎಂಸಿ ನೀರನ್ನು ಇಂದು ಸಂಜೆಯಿಂದಲೇ ಮಲಪ್ರಭಾ ಅಚ್ಚುಕಟ್ಟು ಪ್ರದೇಶಕ್ಕೆ ಹರಿಬಿಡಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ. ಸವದತ್ತಿ ತಾಲೂಕಿನ ನವಿಲುತೀರ್ಥ ಜಲಾಶಯದಿಂದ ಮಲಪ್ರಭಾ ನದಿಯ ಅಚ್ಚುಕಟ್ಟು ಪ್ರದೇಶಕ್ಕೆ ನೀರು ಹರಿಸುವ ಕುರಿತು ಇಂದು ಬೆಳಗಾವಿಯಲ್ಲಿ ನಡೆದ ಸಭೆಯಲ್ಲಿ ಈ ವಿಷಯ ತಿಳಿಸಿದ್ದಾರೆ. ಬೆಳಗಾವಿ ಜಿಲ್ಲೆಯ ರೈತರ ಹಾಗೂ ಸಾರ್ವಜನಿಕರು ಹಿತಾಸಕ್ತಿ ಎಷ್ಟು ಮುಖ್ಯವೋ ಅಷ್ಟೇ ಮಲಪ್ರಭಾ ಅಚ್ಚುಕಟ್ಟು ಪ್ರದೇಶದ ರೈತರ ಹಿತಾಸಕ್ತಿ ಕಾಯ್ದುಕೊಳ್ಳುವುದು ಮುಖ್ಯ. ಹೀಗಾಗಿ ಈ ಪ್ರದೇಶ ಕೃಷಿ ಹಾಗೂ ಕುಡಿಯುವ ನೀರಿನ ಅನುಕೂಲತೆಗಾಗಿ ೬ ಟಿಎಂಸಿ ನೀರನ್ನು ಇಂದಿನಿಂದ ಹರಿಬಿಡಲು ನೀರಾವರಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಕಾರ್ಮಿಕರ ವಿಮಾ ಸಂಸ್ಥೆ - ಇಎಸ್‌ಐಸಿ ಜುಲೈ ಒಂದರಿಂದ ಡಿಸೆಂಬರ್ ಅಂತ್ಯದವರೆಗೂ ಸಿಬ್ಬಂದಿ ಮತ್ತು ಉದ್ಯಮಿಗಳ ನೋಂದಣಿಗೆ ವಿಶೇಷ ಅಭಿಯಾನವನ್ನು ಹಮ್ಮಿಕೊಂಡಿದ್ದು, ಇದರ ಸದುಪಯೋಗ ಪಡೆದುಕೊಳ್ಳುವಂತೆ ಪ್ರಾದೇಶಿಕ ಕಚೇರಿ ನಿರ್ದೇಶಕ ಮನೋಜ್ ಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿಬ್ಬಂದಿ ಮತ್ತು ಉದ್ಯಮಿಗಳು ಈ ಅಭಿಯಾನದ ವೇಳೆ ನೋಂದಣಿ ಮಾಡಿಕೊಂಡರೆ ಹಿಂದಿನ ದಾಖಲಾತಿಗಳನ್ನು ಪರಿಶೀಲಿಸದೆ, ಯಾವುದೇ ದಂಡ ವಿಧಿಸದೆ, ನೋಂದಣಿ ಮಾಡಿಕೊಳ್ಳಲಾಗುವುದು ಎಂದು ತಿಳಿಸಿದರು. ನೋಂದಣಿ ಮಾಡಿಕೊಂಡ ಸಿಬ್ಬಂದಿಗಳಿಗೆ ಆರೋಗ್ಯ ರಕ್ಷಣೆ ಅಲ್ಲದೆ, ಬಾಣಂತಿ ಭತ್ಯೆ ಹಾಗೂ ಅಂಗವೈಕಲ್ಯ ಸಂದರ್ಭದಲ್ಲಿ ನೆರವನ್ನು ಸಂಸ್ಥೆ ಒದಗಿಸುತ್ತದೆ, ಅಲ್ಲದೆ ಅನ್ಯ ಪಿಂಚಣಿ ಸೌಲಭ್ಯವನ್ನು ಕಲ್ಪಿಸುತ್ತದೆ ಎಂದು ಅವರು ತಿಳಿಸಿದರು. ಈ ವರ್ಷ ಅಕ್ಟೋಬರ್ ೧ ರಿಂದ ಮುಂದಿನ ವರ್ಷ ಅಕ್ಟೋಬರ್ ೧೩ರ ವರೆಗೂ ಆಮ್‌ನೆಸ್ಟಿಕ್ ಯೋಜನೆ ಜಾರಿಗೆ ಬರಲಿದ್ದು, ಕಾರ್ಮಿಕರ ರಾಜ್ಯ ವಿಮಾ ನಿಗಮ ಸಂಬಂಧಿಸಿದ ವ್ಯಾಜ್ಯಗಳ ಇತ್ಯರ್ಥಕ್ಕೆ ವಿಶೇಷ ಗಮನ ಹರಿಸಲಾಗುವುದು ಎಂದು ನಿಗಮದ ಪ್ರಾದೇಶಿಕ ನಿರ್ದೇಶಕ ಮನೋಜ್ ಕುಮಾರ್ ತಿಳಿಸಿದ್ದಾರೆ.

<><*<><>*><>

ಗಂಗಾವತಿ  ತಾಲ್ಲೂಕಿನ ಹಿರೇಬೆಣಕಲ್ಲ ಮತ್ತು ಚಿಕ್ಕ ಬೆಣಕಲ್ ಗ್ರಾಮದ ಮದ್ಯ ಇರುವ ಕತ್ತೆ ಗುಡ್ಡದಲ್ಲಿ  ಮೂರು ಸಾವಿರ ವರ್ಷಗಳಷ್ಟು ಹಳೆಯ ಮತ್ತು ತಾಮ್ರ ಯುಗಕ್ಕೆ ಸೇರಿದ್ದು ಎನ್ನಲಾಗಿರುವ ಗವಿಚಿತ್ರ ಮತ್ತು ಶಿಲಾ ಶಾಸನವನ್ನು  ಇತಿಹಾಸ ಸಂಶೋಧಕರ ತಂಡ ಪತ್ತೆ ಹಚ್ಚಿದೆ. ಇತಿಹಾಸ ಸಂಶೋಧಕ ಹಾಗೂ ಪ್ರಾಧ್ಯಾಪಕ ಡಾ.ಶರಣಪ್ಪಬಸಪ್ಪ ಕೋಲ್ಕಾರ ಅವರ ನೇತೃತ್ವದ ತಂಡ, ಈ ಶಿಲಾಶಾಸನವನ್ನು ಕಂಡುಹಿಡಿದಿದೆ. "ಶಾಸನವು ೫ ಸಾಲಿನಲ್ಲಿದ್ದು ಸೂರ್ಯ, ಚಂದ್ರ, ದ್ವಿನಾಮ ಮತ್ತು ಬಿಲ್ಲು ಬಾಣದ ಚಿತ್ರಗಳ ಜೊತೆ ಬರೆಯಲ್ಪಟ್ಟಿದೆ. ಶಾಸನದಲ್ಲಿ ರಾಮನಾಥ ದೇವರ ಆರಾಧನೆಗಾಗಿ ಪತಿ ಚಿನ್ನಾಯಕನು ೨೨ ಖಂಡುಗ ಹೊಲವನ್ನು ದಾನವಾಗಿ ನೀಡಿದ ಬಗ್ಗೆ ತಿಳಿಸಲಾಗಿದೆ.

ಧ್ವನಿ : ಡಾ.ಶರಣಬಸಪ್ಪ ಕೋಲಕಾರ ಸಂಶೋಧಕರು.

ಬೆಟ್ಟದ ತಳಭಾಗದಲ್ಲಿ ದಕ್ಷಿಣಾಭಿಮುಖವಾಗಿರುವ ಒಂದು ಕಲ್ಲಾಸರೆಯಲ್ಲಿ ೧೭ನೇ ಶತಮಾನದ ಕನ್ನಡ ಶಾಸನವಿದೆ. ಮತ್ತು ಬೆಟ್ಟದ ತುದಿಯಲ್ಲಿರುವ ಮತ್ತೊಂದು ಕಲ್ಲಾಸರೆಯಲ್ಲಿ ಆದಿ ಮಾನವರು ಬಿಡಿಸಿರುವ ವರ್ಣಚಿತ್ರಗಳಿವೆ ಎಂದು ತಂಡ ಹೇಳಿದೆ.

<><*<><>*><>

ಕರ್ನಾಟಕ ರಾಜ್ಯ ಪೊಲೀಸ್ ವತಿಯಿಂದ ರಾಜ್ಯದಾದ್ಯಂತ ಹಮ್ಮಿಕೊಂಡಿರುವ 'ಮನೆ-ಮನೆಗೆ ಪೊಲೀಸ್' ವಿನೂತನ ಕಾರ್ಯಕ್ರಮಕ್ಕೆ ಗೃಹ ಸಚಿವ ಡಾ. ಜಿ.ಪರಮೇಶ್ವರ ಬೆಂಗಳೂರಿನ ಗೋವಿಂದರಾಜನಗರದಲ್ಲಿ ಇಂದು ಚಾಲನೆ ನೀಡಿದ್ದಾರೆ. ಪೊಲೀಸ್ ಇಲಾಖೆ ಹೊರತಂದಿರುವ 'ಮನೆ ಮನೆಗೆ ಪೊಲೀಸ್' ಕೈಪಿಡಿಯನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು, ದೇಶದಲ್ಲಿ ಪ್ರಥಮ ಬಾರಿಗೆ ಮನೆ ಮನೆಗೆ ಪೊಲೀಸ್ ವಿನೂತನ ಕಾರ್ಯಕ್ರಮ ಮಾಡಲಾಗುತ್ತಿದೆ. ಬೇರೆ ಯಾವ ರಾಜ್ಯದಲ್ಲಿಯೂ ಸಹ ಇಂತಹ ಕಾರ್ಯಕ್ರಮ ಮಾಡಿಲ್ಲ. ಇದರ ಯಶಸ್ವಿ ದೇಶವ್ಯಾಪ್ತಿ ಆಗುತ್ತದೆ ಎಂದು ತಿಳಿಸಿದ್ದಾರೆ. ನಿಗದಿತ ಸಮಯದಲ್ಲಿ ಎಲ್ಲ ಮನೆಗಳ ಡೇಟಾ ಸಂಗ್ರಹಿಸಬೇಕು. ಬೇರೆ ರಾಜ್ಯಗಳ ಪೊಲೀಸರಿಗೆ ಮಾದರಿಯಾಗಬೇಕು ಎಂದು ಅವರು ಸೂಚಿಸಿದ್ದಾರೆ. ಮನೆ ಮನೆಗೆ ಪೊಲೀಸ್ ಕಾರ್ಯಕ್ರಮದ ಕುರಿತು ವಿಡಿಯೋ ಕಾನ್ಫರೆನ್ಸ್ ಮೂಲಕ ಕೆಲವು ಜಿಲ್ಲೆಗಳ ಎಸ್‌ಪಿ ಹಾಗೂ ಪೊಲೀಸ್ ಕಮಿಷರ್‌ಗಳೊಂದಿಗೆ ಸಂವಾದ ನಡೆಸಿ ಕಾರ್ಯಕ್ರಮದ ಕುರಿತು ಮಾಹಿತಿ ಪಡೆದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>